# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಸಿ. ನಾಗರಾಜು, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರ ಮೇಲ್ಮನವಿ - ಅಂತಿಮ ಆದೇಶ.

**ಓದಲಾಗಿದೆ:-**

1. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರ ಪತ್ರ ಸಂಖ್ಯೆ. ಕಾನಿಇಂ/ದಕಪಂರಾಇಂವಿ/ಮಂ/ಸಿ-2/ಗುತ್ತಿಗೆ ಅವಧಿ/2010-11, ದಿನಾಂಕ. 27-10-2010.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು ಇವರ ಪತ್ರ ಸಂಖ್ಯೆ. ದಕಜಿಪ/ಆಡಳಿತ/ ಶಿಸ್ತು/ಸಿಆರ್-30/2010-11(ಎ6), ದಿನಾಂಕ. 15-12-2010.

*****

ಪ್ರಸ್ತಾವನೆ:

ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರು ಶ್ರೀ ಸಿ.ನಾಗರಾಜು, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು ಇವರು ದಿನಾಂಕ. 22-07-2010ರಂದು ಹೊರಡಿಸಿದ್ದ ದಂಡನಾದೇಶದ ವಿರುದ್ಧ ಸರ್ಕಾರಕ್ಕೆ ಸಲ್ಲಿಸಲಾದ ಮೇಲ್ಮನವಿಯನ್ನು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ. 27-10-2010ರಲ್ಲಿ ಮುಂದಿನ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದ್ದರು.

ಶ್ರೀ ಸಿ.ನಾಗರಾಜು, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರು ಕೇಂದ್ರ ಪುರಸ್ಕೃತ Water Quality Monitoring and Surveillance ನ HRO / IEC ಕಾರ್ಯಕ್ರಮದ ಅನುಷ್ಠಾನದ ಬಗ್ಗೆ ಕೊಳವೆ ಬಾವಿ ಮತ್ತು ಇತರೆ ನೀರು ಸರಬರಾಜುಗಳ ಕೋಡಿಫಿಕೇಷನ್ ಮಾಡಿ ಆನ್‌ಲೈನ್‌ನಲ್ಲಿ ಭರ್ತಿ ಮಾಡದೇ ಕರ್ತವ್ಯ ಲೋಪ ಎಸಗಿದ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು ಇವರು ದಿನಾಂಕ. 31-12-2009ರಂದು ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ರಹಿತವಾಗಿ ತಡೆಹಿಡಿದು ಹೊರಡಿಸಲಾದ ದಂಡನಾದೇಶದ ವಿರುದ್ಧ ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರವರು ವಿಚಾರಣೆ ನಡೆಸದೇ ನಿಯಮ-12ರ ಪ್ರಕಾರ ದಂಡನೆ ವಿಧಿಸಿರುವುದು ನೈಸರ್ಗಿಕ ನ್ಯಾಯ ತತ್ವ (ನ್ಯಾಚುರಲ್ ಜಸ್ಟೀಸ್) ಉಲ್ಲಂಘನೆಯಾಗಿರುವುದರಿಂದ ಸದರಿ ದಂಡನಾದೇಶವನ್ನು ರದ್ದುಗೊಳಿಸಬೇಕೆಂದು ವಿನಂತಿಸಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು ಇವರು ಶ್ರೀ ಸಿ.ನಾಗರಾಜು, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರಿಗೆ ದಿನಾಂಕ. 16-09-2009ರಂದು ಕಾರಣ ಕೇಳುವ ನೋಟೀಸನ್ನು ನೀಡಿದ್ದರೂ ಸಹ ಸದರಿ ಅಧಿಕಾರಿಯು ಯಾವುದೇ ಲಿಖಿತ ಹೇಳಿಕೆ / ಸಮಜಾಯಿಷಿ ನೀಡಿಲ್ಲದಿರುವುದರಿಂದ ಹಾಗೂ ಲಿಖಿತ ಸಮಜಾಯಿಷಿ ನೀಡಲು ಸಾಕಷ್ಟು ಕಾಲಾವಕಾಶ ನೀಡಿದ್ದರೂ

----2

ಸಹ ಸದರಿಯವರು ಯಾವುದೇ ಲಿಖಿತ ಸಮಜಾಯಿಷಿಯನ್ನು ನೀಡದೇ ಮೇಲಾಧಿಕಾರಿಗಳ ಆದೇಶವನ್ನು ಉಲ್ಲಂಘಿಸಿರುತ್ತಾರೆ. ಅಲ್ಲದೆ, ಕಾರಣ ಕೇಳುವ ನೋಟೀಸಿಗೆ ಲಿಖಿತ ಸಮಜಾಯಿಷಿಯನ್ನು ನೀಡದೇ ಇದ್ದ ಕಾರಣ ವಿಚಾರಣೆ ನಡೆಸುವ ಅವಶ್ಯಕತೆ ಇರುವುದಿಲ್ಲವೆಂದು ತಿಳಿಸುತ್ತಾ ದಿನಾಂಕ. 31-12-2009ರಂದು ಹೊರಡಿಸಿರುವ ದಂಡನಾದೇಶವನ್ನು ನಿಯಮಾನುಸಾರ ಇರುತ್ತದೆ ಎಂದು ಹಾಗೂ ಯಾವುದೇ ನೈಸರ್ಗಿಕ ನ್ಯಾಯತತ್ವ ಉಲ್ಲಂಘನೆಯಾಗಿರುವುದಿಲ್ಲವೆಂದು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 15-12-2010ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮಂಗಳೂರು ರವರು ವರದಿ ಮಾಡಿರುತ್ತಾರೆ.

ಮೇಲ್ಮನವಿದಾರರ ಮೇಲ್ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಲಾಯಿತು. ಶ್ರೀ ಸಿ.ನಾಗರಾಜು, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು ರವರು ದಿನಾಂಕ. 16-09-2009ರಂದು ಕಾರಣ ಕೇಳುವ ನೋಟೀಸು ಹಾಗೂ ದಿನಾಂಕ. 19-11-2009ರಂದು ನೀಡಲಾದ ಜ್ಞಾಪನ ಪತ್ರಕ್ಕೆ ಯಾವುದೇ ಲಿಖಿತ ಸಮಜಾಯಿಷಿ ನೀಡದೇ ಕರ್ತವ್ಯಲೋಪ, ನಿರ್ಲಕ್ಷ್ಯತೆ, ದುರ್ನಡತೆ ಹಾಗೂ ಬೇಜವಾಬ್ದಾರಿಯಿಂದ ನಡೆದುಕೊಂಡು ಮೇಲಾಧಿಕಾರಿಗಳ ಆದೇಶವನ್ನು ಉಲ್ಲಂಘಿಸಿರುವುದು ಸ್ಪಷ್ಟವಾಗಿ ಕಂಡುಬರುತ್ತದೆ. ಅಲ್ಲದೆ, ಈ ಪ್ರಕರಣದಲ್ಲಿ ಯಾವುದೇ ನೈಸರ್ಗಿ ನ್ಯಾಯತತ್ವ ಉಲ್ಲಂಘನೆಯಾಗದಿರುವುದು ಕಂಡುಬಂದಿರುತ್ತದೆ. ಆದ್ದರಿಂದ ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ. ಗ್ರಾಅಪ 306 ಜಿಪಅ 2010, ಬೆಂಗಳೂರು, ದಿನಾಂಕ.17-04-2012**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣದಿಂದ ಶ್ರೀ ಸಿ.ನಾಗರಾಜು, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು ಇವರು ಸಲ್ಲಿಸಲಾದ ಮೇಲ್ಮನವಿಯನ್ನು ತಿರಸ್ಕರಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು ಇವರು ದಿನಾಂಕ. 31-12-2009ರಂದು ಹೊರಡಿಸಿರುವ ದಂಡನಾದೇಶವನ್ನು ಎತ್ತಿಹಿಡಿಯಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17/4/12
(ಎನ್.ವೈ.ಸಾಗರ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ರಿಸಾಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು,
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು.
3. ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು.
4. ಶ್ರೀ ಸಿ.ನಾಗರಾಜು, ಸಹಾಯಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ಮಂಗಳೂರು.
5. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ/ ಉಪ ಕಾರ್ಯದರ್ಶಿ ಇವರುಗಳ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
6. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
7. ರಕ್ಷಾ ಕಡತ / ಮಾಹಿತಿ ಕೇಂದ್ರ/ ಹೆಚ್ಚುವರಿ ಪ್ರತಿಗಳು.